ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

12

ಇಲಾಖೆ / ವಿಷಯ : DEPARTMENT / SUBJECT: ಪ್ರಧಾನ ಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ

ದಿನಾಂಕ : DATE 7/2/21

# ನ್ಯಾಯಾಂಗ ವ್ಯವಸ್ಥೆಗೆ ಮೋದಿ ಹೊಗಳಿಕೆ

7/2/21

## ಗುಜರಾತ್ ಹೈಕೋರ್ಟ್ ಸ್ಥಾಪನಾ ದಿನ

**ಅಹಮದಾಬಾದ್:** ದೇಶದ ನ್ಯಾಯಾಂಗ ವ್ಯವಸ್ಥೆಯು ದೇಶವಾಸಿಗಳ ಹಕ್ಕುಗಳನ್ನು ರಕ್ಷಿಸುವಲ್ಲಿ ವೈಯಕ್ತಿಕ ಸ್ವಾತಂತ್ರ್ಯವನ್ನು ಎತ್ತಿಹಿಡಿಯುವಲ್ಲಿ ತನ್ನ ಕೆಲಸವನ್ನು ಉತ್ತಮವಾಗಿ ನಿಭಾಯಿಸುತ್ತಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಗುಜರಾತ್ ಹೈಕೋರ್ಟ್ ಸ್ಥಾಪನೆಯ 60ನೇ ವರ್ಷಾಚರಣೆ ಹಿನ್ನೆಲೆಯಲ್ಲಿ ಶನಿವಾರ ವರ್ಚುವಲ್ ಕಾರ್ಯಕ್ರಮದ ಮೂಲಕ ಅಂಚೆ ಚೀಟಿ ಬಿಡುಗಡೆ ಮಾಡಿದ ಮೋದಿ, "ನಮ್ಮ ನ್ಯಾಯಾಂಗ ವ್ಯವಸ್ಥೆಯು ಸಂವಿಧಾನವನ್ನು ಎತ್ತಿಹಿಡಿಯುವುದಕ್ಕಾಗಿ ದೃಢವಾಗಿ ಕೆಲಸ ಮಾಡುತ್ತಾ ಬಂದಿದೆ ಎಂದು ಪ್ರತಿಯೊಬ್ಬ ನಾಗರಿಕನೂ ಹೇಳಬಲ್ಲ, ನಮ್ಮ ನ್ಯಾಯಾಂಗವು ತನ್ನ ಸಕಾರಾತ್ಮಕ ವ್ಯಾಖ್ಯಾನಗಳಿಂದ ಸಂವಿಧಾನವನ್ನು ಬಲಿಷ್ಠಗೊಳಿಸಿದೆ" ಎಂದರು.



ಅಲ್ಲದೇ, ಕೋವಿಡ್ ಸಮಯದಲ್ಲಿ ಕೋರ್ಟ್‌ಗಳು ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ವಿಚಾರಣೆ ನಡೆಸಿದ್ದನ್ನೂ ಉಲ್ಲೇಖಿಸಿದ ಅವರು, "ಸಾಂಕ್ರಾಮಿಕದ ವೇಳೆ ಭಾರತದ ಸರ್ವೋಚ್ಚ ನ್ಯಾಯಾಲಯವು ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಕೈಗೊಂಡಷ್ಟು ವಿಚಾರಣೆಗಳನ್ನು ಜಗತ್ತಿನ ಯಾವುದೇ ರಾಷ್ಟ್ರಗಳ ಉನ್ನತ ನ್ಯಾಯಾಲಯಗಳೂ ಕೈಗೊಂಡಿಲ್ಲ" ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಕೇಂದ್ರ ಕಾನೂನು ಸಚಿವ ರವಿಶಂಕರ್ ಪ್ರಸಾದ್, ಗುಜರಾತ್ ಮುಖ್ಯಮಂತ್ರಿ ವಿಜಯ ರೂಪಾನಿ, ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಎಂ.ಆರ್.ಶಾ, ಗುಜರಾತ್ ಹೈಕೋರ್ಟ್ ಮುಖ್ಯ ನ್ಯಾಯಾಧೀಶ ವಿಕ್ರಮ್‌ನಾಥ್ ಸೇರಿದಂತೆ ಇತರೆ ಗಣ್ಯರು ಪಾಲ್ಗೊಂಡಿದ್ದರು.

### ಪ್ರಧಾನಿಯನ್ನು ಕೊಂಡಾಡಿದ ನ್ಯಾಯಮೂರ್ತಿ

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಎಂ.ಆರ್. ಶಾ ಅವರು, ಪ್ರಧಾನಿ ಮೋದಿಯವರನ್ನು ಬಹುವಾಗಿ ಕೊಂಡಾಡಿದ್ದಾರೆ. "ಗುಜರಾತ್ ಹೈಕೋರ್ಟ್‌ನ ವಜ್ರಮಹೋತ್ಸವದಲ್ಲಿ ಭಾಗವಹಿಸಲು ನನಗೆ ಹೆಮ್ಮೆಯಾಗುತ್ತಿದೆ. ಅದೂ ಪ್ರಧಾನಿ ನರೇಂದ್ರ ಮೋದಿಯವರಂಥ ಅತ್ಯಂತ ಜನಪ್ರಿಯ, ಹುರುಪಿನ, ಪ್ರೀತಿಪಾತ್ರ, ದೂರದೃಷ್ಟಿಯ ನಾಯಕನ ಉಪಸ್ಥಿತಿಯಲ್ಲಿ..." ಎಂದಿದ್ದಾರೆ. ಅಲ್ಲದೇ ಗುಜರಾತ್ ಹೈಕೋರ್ಟ್ ತಮ್ಮ ಕರ್ಮಭೂಮಿಯಾಗಿದ್ದು, ಈ ನ್ಯಾಯಾಲಯವು ಎಂದಿಗೂ ಲಕ್ಷ್ಮಣರೇಖೆಯನ್ನು ದಾಟದೇ, ನ್ಯಾಯದಾನ ಮಾಡುತ್ತಾ ಬಂದಿರುವುದು ಹೆಮ್ಮೆಯ ವಿಷಯ ಎಂದು ನ್ಯಾ.ಎಂ.ಆರ್. ಶಾ ಹೇಳಿದ್ದಾರೆ. ಕಳೆದ ವರ್ಷ ನ್ಯಾ.ಅರುಣ್ ಮಿಶ್ರಾ ಅವರು ಮೋದಿಯವರನ್ನು 'ಅಂತಾರಾಷ್ಟ್ರೀಯ ಮನ್ನಣೆ ಗಳಿಸಿರುವ ದೂರದೃಷ್ಟಿಯ ನಾಯಕ' ಎಂದು ಪ್ರಶಂಸಿಸಿದ್ದರು.